ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಮಹಿಳೆಯರ ಆರೋಗ್ಯ ಮಕ್ಕಳ ಪೌಷ್ಠಿಕ ಆಹಾರ ಭದ್ರತೆ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

245 (354) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಮಹಿಳೆಯರ ಆರೋಗ್ಯ, ಮಕ್ಕಳಿಗೆ ಪೌಷ್ಠಿಕ ಆಹಾರ ಭದ್ರತೆಯ ವಿಚಾರದಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು)

(ಆ) ಪ್ರಸ್ತುತ ರಾಜ್ಯದಲ್ಲಿ ಎಷ್ಟು ಹೊಸ ಅಂಗನವಾಡಿಗಳ ಬೇಡಿಕೆ ಇದೆ ; ಈಗಿರುವ ಅಂಗನವಾಡಿ ಕೇಂದ್ರಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿದೆಯೇ ; (ಮಾಹಿತಿ ನೀಡುವುದು)

(ಇ) ರಾಜ್ಯದ ಬರಪೀಡಿತ ಗ್ರಾಮೀಣ ಪ್ರದೇಶದ ಮಕ್ಕಳ ಅಪೌಷ್ಠಿಕತೆ ಹೋಗಲಾಡಿಸಲು ಸರ್ಕಾರದ ಮುಂದೆ ಯಾವ ಯಾವ ಯೋಜನೆಗಳಿವೆ ; (ವಿವರ ನೀಡುವುದು)

(ಈ) ಕಳೆದೆರಡು ವರ್ಷಗಳಲ್ಲಿ ರಾಜ್ಯದ ವಿಕಲಾಂಗರಿಗೆ ಎಷ್ಟು ತ್ರಿಚಕ್ರ ವಾಹನಗಳನ್ನು ಹಾಗೂ ಇತರ ಪರಿಕರಗಳನ್ನು ವಿತರಿಸಲಾಗಿದೆ; (ವಿವರ ನೀಡುವುದು)

(ಉ) ಹಿರಿಯ ನಾಗರಿಕರ ಸಬಲೀಕರಣಕ್ಕೆ ಈವರೆಗೆ ಸಕಾರ ವ್ಯಯಿಸಿದ ಹಣವೆಷ್ಟು ; ಯಾವ ಯೋಜನೆಗಳು ಫಲಾನುಭವಿಗಳಿಗೆ ತಲುಪಿವೆ; ಯಾವ ಯೋಜನೆಗಳು ಇನ್ನೂ ಕಾರ್ಯಗತಗೊಂಡಿಲ್ಲ ? (ವಿವರ ನೀಡುವುದು)